ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರ ನೇಮಕಾತಿಯ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-

1279 (1543) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳೆಷ್ಟು ; ದಿನಾಂಕ: 01.07.2014 ರಂದು ಎಷ್ಟು ಹುದ್ದೆಗಳನ್ನು ತುಂಬಲು ಅರ್ಜಿ ಆಹ್ವಾನಿಸಲಾಗಿತ್ತು ;

(ಆ) ಇಲಾಖೆಗೆ ಬಂದ ಅರ್ಜಿಗಳು ಎಷ್ಟು ; ಇವುಗಳಿಂದ ಬಂದ ಅರ್ಜಿ ಶುಲ್ಕವೆಷ್ಟು ; ವಿವರವಾಗಿ ಎಸ್.ಸಿ., ಎಸ್.ಟಿ ಇತರೆಗಳೊಂದಿಗೆ ವಿವರವಾದ ಮಾಹಿತಿ ನೀಡುವುದು;

(ಇ) ಹಾಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯದಿಂದ ಆದೇಶÀ ಬಂದಿರುವುದು ನಿಜವೇ ; ಹಾಗಾದರೆ, ನ್ಯಾಯಾಲಯದ ಪ್ರತಿ ನೀಡುವುದು ;

(ಈ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಲಾಗಿದ್ದರೆ, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅವರು ತುಂಬಿದ ಅರ್ಜಿ ಶುಲ್ಕವನ್ನು ಯಾವ ರೀತಿ ಮತ್ತು ಯಾವಾಗ ಹಿಂದಿರುಗಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)